ಹುದ್ದೆಗಳ ಸಂಖ್ಯೆ ಎಷ್ಟು, ಕೆಲಸ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ;

ಆ) ಖಾಲಿ ಇರುವ ಸಂಖ್ಯೆ ಎಷ್ಟು ;

ಇ) ಈ ಪದವೀಧರರಿಗೆ ಉದ್ಯೋಗ ನೀಡಲು ಸರ್ಕಾರದ ಮಟ್ಟದಲ್ಲಿ ಹುದ್ದೆಗಳ ಸೃಜನೆಗಾಗಿ ಕ್ರಮವಿದೆಯೇ, ಹಾಗಿದ್ದಲ್ಲಿ ಕೈಗೊಂಡ ಕ್ರಮದ ಮಾಹಿತಿ ನೀಡುವುದು?

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):–

ಅ) ಯಾವುದೂ ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಸರ್ಕಾರಿ ಕಾಲೇಜಿನಲ್ಲಿ ಪ್ರಾರಂಭಿಸಲಾದ ಅಂತಹ ಕೋರ್ಸಿಗೆ ಉಪನ್ಯಾಸಕರ ಹುದ್ದೆ ಸೃಜಿಸಲು ಕ್ರಮಕೈಗೊಳ್ಳಲಾಗುತ್ತಿದೆ.

1027 (1103) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮುದ್ದೇಬಿಹಾಳ ತಾಲ್ಲೂಕು ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಪ್ರಸ್ತುತ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

ಆ) ಅವುಗಳನ್ನು ತುಂಬಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

ಇ) ಹಿಂದುಳಿದ ಈ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳ ಸರ್ಕಾರಿ ಶಾಲೆಗಳಿಗೆ ಸಿಬ್ಬಂದಿ ಮತ್ತು ಅವಶ್ಯಕ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡಲು ಸರ್ಕಾರದ ಆದ್ಯತಾ ಕ್ರಮಗಳೇನು ?

ಶ್ರೀ ಬಸವರಾಜ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):–

ಅ) ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಖಾಲಿ ಹುದ್ದೆಗಳು–8, ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ಖಾಲಿ ಹುದ್ದೆಗಳು–13, ಬೋಧಕೇತರ ಹುದ್ದೆಗಳು–02.

ಆ) ಮುದ್ದೇಬಿಹಾಳ ತಾಲ್ಲೂಕಿನ ಹುದ್ದೆಗಳು ಸೇರಿದಂತೆ ರಾಜ್ಯದಲ್ಲಿ ಒಟ್ಟು 8939 ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳ ನೇಮಕಾತಿಗೆ ಶೀಘ್ರದಲ್ಲಿ ನೇಮಕಾತಿ ಅಧಿಸೂಚನೆ ಹೊರಡಿಸಲಾಗುವುದು.

ಮುದ್ದೇಬಿಹಾಳ ತಾಲ್ಲೂಕಿನ ಹುದ್ದೆಗಳು ಸೇರಿದಂತೆ ರಾಜ್ಯದಲ್ಲಿ ಒಟ್ಟು 3062 ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಈ ಹುದ್ದೆಗಳ ನೇಮಕಾತಿಗೆ ಶೀಘ್ರದಲ್ಲಿ ನೇಮಕಾತಿ ಅಧಿಸೂಚನೆ ಹೊರಡಿಸಲಾಗುವುದು.

ಇಲಾಖೆಯಲ್ಲಿ ಖಾಲಿ ಇರುವ 500 ಪ್ರದಸ ಹುದ್ದೆಗಳನ್ನು ತುಂಬಲು ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ನೇರ ನೇಮಕಾತಿಯಿಂದ ತುಂಬಲು ಕ್ರಮ ವಹಿಸಲಾಗುತ್ತಿದೆ.

ಗ್ರೂಪ್ 'ಡಿ' ಹುದ್ದೆಗಳನ್ನು ಆದ್ಯತೆಯ ಮೇರೆಗೆ ಅನುಕಂಪದ ಆಧಾರದ ಅಭ್ಯರ್ಥಿಗಳಿಂದ ತುಂಬಲು ಕ್ರಮ ವಹಿಸಲಾಗುತ್ತಿದೆ.

ಇ) ಸರ್ವ ಶಿಕ್ಷಣ ಅಭಿಯಾನದಡಿಯಲ್ಲಿ ಆರ್.ಐ.ಡಿ.ಎಫ್. ರಾಜ್ಯ ಯೋಜನೆಗಳಡಿ ಅವಶ್ಯಕವಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಶಾಲೆಗಳಿಗೆ ಒದಗಿಸಲಾಗುತ್ತಿದೆ.

1028 (1224) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬಿಜಾಪುರದಲ್ಲಿರುವ ಮಹಿಳಾ ವಿಶ್ವವಿದ್ಯಾಲಯಕ್ಕೆ 2005–06 ಹಾಗೂ 2006–07ರಲ್ಲಿ ಸರ್ಕಾರ ನೀಡಿದ ಅನುದಾನವೆಷ್ಟು ;

ಆ) ಈ ವಿಶ್ವವಿದ್ಯಾಲಯದಲ್ಲಿ 2006–07ರಲ್ಲಿ ಪ್ರಾರಂಭಿಸಲಾದ ಹೊಸ ಕೋರ್ಸುಗಳು ಯಾವುವು ;

ಇ) ಈ ವಿಶ್ವವಿದ್ಯಾಲಯದ ಈಗಿರುವ ಕಾರ್ಯವ್ಯಾಪ್ತಿ ಏನು ;

ಈ) ಈ ವ್ಯಾಪ್ತಿಯನ್ನು ಹೆಚ್ಚಿಸಲು ಸರ್ಕಾರ ಆಲೋಚಿಸಿದೆಯೇ ;

ಉ) ಈ ವಿಶ್ವವಿದ್ಯಾಲಯದಿಂದ ಅಂಚೆ ತೆರಪಿನ ಶಿಕ್ಷಣ, ಪದವಿ ಹಾಗೂ ಸ್ನಾತಕೋತ್ತರ ಪದವಿ ಕೋರ್ಸುಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):–

ಅ) ಮಹಿಳಾ ವಿಶ್ವವಿದ್ಯಾಲಯಕ್ಕೆ 2005–06 ಹಾಗೂ 2006–07ರಲ್ಲಿ ಸರ್ಕಾರವು ನೀಡಿದ ಅನುದಾನಗಳು ಈ ಕೆಳಕಂಡಂತಿವೆ :–

1. 2005–06	ರೂ. 375 ಲಕ್ಷಗಳು
2. 2006–07	ರೂ. 400 ಲಕ್ಷಗಳು